**ಕರ್ನಾಟಕ ವಿಧಾನ ಪರಿಷತ್ತು**

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 144
ಮಾನ್ಯ ಸದಸ್ಯರ ಹೆಸರು : ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ : 10.12.2024
ಉತ್ತರಿಸುವ ಸಚಿವರು : ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮಂಗಳೂರು ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಮಾರುಕಟ್ಟೆಯ ಕಾಮಗಾರಿ ಪೂರ್ಣಗೊಳ್ಳದೇ ಸರ್ಕಾರದ ಹಣ ಪೋಲು ಮಾಡುತ್ತಿದ್ದು, ಈ ಬಗ್ಗೆ ಸರ್ಕಾರ ಏನು ಕ್ರಮಕೈಗೊಂಡಿದೆ; | ಮಂಗಳೂರು ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಬರುವ ಮಂಗಳೂರು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಬೈಕಂಪಾಡಿ ಮಾರುಕಟ್ಟೆ ಪ್ರಾಂಗಣದಲ್ಲಿ ಆಧುನಿಕ ಹಣ್ಣು ಮತ್ತು ತರಕಾರಿ ಮಾರುಕಟ್ಟೆ ಕಾಮಗಾರಿಯನ್ನು ಕೈಗೊಂಡಿದ್ದು, ಮುಕ್ತಾಯ ಹಂತದಲ್ಲಿರುತ್ತದೆ. ನಿಗದಿತ ಅವಧಿಯೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸಿ ಹಂಚಿಕೆಗೆ ಕ್ರಮ ಕೈಗೊಳ್ಳಲಾಗುವುದರಿಂದ ಹಣ ಪೋಲಾಗುವುದಿಲ್ಲ |
| ಆ) | ಮಂಗಳೂರು ನಗರದಲ್ಲಿ ಎಷ್ಟು ಮಾರುಕಟ್ಟೆಗಳನ್ನು ಕಟ್ಟಲಾಗಿದೆ; ಪೂರ್ಣಗೊಂಡ ಮಾರುಕಟ್ಟೆಗಳೆಷ್ಟು; ಇದಕ್ಕೆ ತಗಲುವ ವೆಚ್ಚ ಎಷ್ಟು; | ಮಂಗಳೂರು ನಗರದಲ್ಲಿ ಕೃಷಿ ಮಾರಾಟ ಇಲಾಖೆಯಿಂದ ಬೈಕಂಪಾಡಿ ಮಾರುಕಟ್ಟೆ ಪ್ರಾಂಗಣದಲ್ಲಿ ಒಂದು ಆಧುನಿಕ ಹಣ್ಣು ಮತ್ತು ತರಕಾರಿ ಮಾರುಕಟ್ಟೆ ಕಾಮಗಾರಿಯನ್ನು ಕೈಗೊಂಡಿದ್ದು, ಕಾಮಗಾರಿಯು ಮುಕ್ತಾಯ ಹಂತದಲ್ಲಿರುತ್ತದೆ. ಇದಕ್ಕಾಗಿ ರೂ.275.68 ಲಕ್ಷಗಳನ್ನು ವೆಚ್ಚ ಮಾಡಲಾಗಿರುತ್ತದೆ. |
| ಇ) | ಮಾರುಕಟ್ಟೆ ನಿರ್ಮಿಸುವಾಗ 08 ಅಂತಸ್ತಿನ ಮಾರುಕಟ್ಟೆಯನ್ನು ಅವೈಜ್ಞಾನಿಕವಾಗಿ ನಿರ್ಮಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರಕ್ಕೆ ಉಂಟಾಗಿರುವ ನಷ್ಟ ಎಷ್ಟು? (ವಿವರ ನೀಡುವುದು) | ಮಂಗಳೂರು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ವತಿಯಿಂದ ಯಾವುದೇ 08 ಅಂತಸ್ತಿನ ಮಾರುಕಟ್ಟೆಯನ್ನು ನಿರ್ಮಿಸಿರುವುದಿಲ್ಲ. |

**ಸಂಖ್ಯೆ: ಸಿಒ 280 ಎಂಆರ್ಇ 2024**

**(ಶಿವಾನಂದ ಎಸ್. ಪಾಟೀಲ)**
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ
ಹಾಗೂ ಕೃಷಿ ಮಾರುಕಟ್ಟೆ ಸಚಿವರು